17

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ : ಬೆಂಗಳೂರು ಕೃಷಿ ವಿಶ್ವವಿದ್ಯಾಲಯಕ್ಕೆ 2012-13ನೇ ಸಾಲಿನ ಯೋಜನೇತರ ಹೆಚ್ಚುವರಿ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ.**

- - - - -

**ಓದಲಾಗಿದೆ :-**

1. ಸರ್ಕಾರದ ಆದೇಶ ಸಂಖ್ಯೆ : ಕೃಇ 47 ಕೃವಿಬೆ 2012 ದಿನಾಂಕ : 03-05-2012.
2. ಸರ್ಕಾರದ ಆದೇಶ ಸಂಖ್ಯೆ : ಕೃಇ 47 ಕೃವಿಬೆ 2012 ದಿನಾಂಕ : 09-08-2012.
3. ಸರ್ಕಾರದ ಆದೇಶ ಸಂಖ್ಯೆ : ಕೃಇ 47 ಕೃವಿಬೆ 2012, ದಿನಾಂಕ : 03-11-2012.
4. ಸರ್ಕಾರದ ಆದೇಶ ಸಂಖ್ಯೆ : ಕೃಇ 47 ಕೃವಿಬೆ 2012, ದಿನಾಂಕ : 06-02-2012.
5. ಕುಲಸಚಿವರು, ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು, ಇವರ ದಿನಾಂಕ : 13/26-09-2012 ಮತ್ತು 11-01-2013ರ ಪತ್ರ ಸಂಖ್ಯೆ : ಹನಿಅ/ವಿಭಾಗ 3/ಸಿ5-2/2012-13.

**ಪ್ರಸ್ತಾವನೆ :-**

ಬೆಂಗಳೂರು ಕೃಷಿ ವಿಶ್ವವಿದ್ಯಾಲಯಕ್ಕೆ ಯೋಜನೇತರ ಉದ್ದೇಶಕ್ಕಾಗಿ ಸರ್ಕಾರವು 2012-13ನೇ ಸಾಲಿನ ಆಯವ್ಯಯದಲ್ಲಿ ಲೆಕ್ಕಶೀರ್ಷಿಕೆ 2415-80-004-01-101 ಅಡಿಯಲ್ಲಿ ರೂ. 7500.00 ಲಕ್ಷಗಳ ಅನುದಾನವನ್ನು ಹಂಚಿಕೆ ಮಾಡಿದ್ದು ಅದರಲ್ಲಿ ತ್ರೈಮಾಸಿಕ ಕಂತುಗಳಲ್ಲಿ ತಲಾ ರೂ. 1875.00 ಲಕ್ಷಗಳನ್ನು ಕ್ರಮವಾಗಿ ಮೇಲೆ (1), (2), (3) ಮತ್ತು (4)ರಲ್ಲಿ ಓದಲಾದ ದಿನಾಂಕ : 03-05-2012, 09-08-2012, 03-11-2012 ಮತ್ತು 06-02-2012ರ ಆದೇಶಗಳಂತೆ ಒಟ್ಟು ರೂ. 7500.00 ಲಕ್ಷಗಳ ಪೂರ್ಣ ಅನುದಾನವನ್ನು ಬಿಡುಗಡೆ ಮಾಡಲಾಗಿದೆ.

ಮೇಲೆ (5)ರಲ್ಲಿ ಓದಲಾದ ಬೆಂಗಳೂರು ಕೃಷಿ ವಿಶ್ವವಿದ್ಯಾಲಯದ ಕುಲಸಚಿವರ ಪತ್ರಗಳಲ್ಲಿ ಬೆಂಗಳೂರು ಕೃಷಿ ವಿಶ್ವವಿದ್ಯಾಲಯವು ಬೋಧಕೇತರ ನೌಕರರಿಗೆ ಮತ್ತು ನಿವೃತ್ತಿ ವೇತನದಾರರಿಗೆ ಕರ್ನಾಟಕ ಸರ್ಕಾರದ 6ನೇ ವೇತನ ಸಮಿತಿಯ ಶಿಫಾರಸಿನನ್ವಯ ವೇತನ ಶ್ರೇಣಿಯ ಸೌಲಭ್ಯಗಳನ್ನು ಏಪ್ರಿಲ್ 2012ರಿಂದ ಅನುಷ್ಠಾನಗೊಳಿಸಲಾಗಿದೆ. ಈ ಸಂಬಂಧ ವಿಶ್ವವಿದ್ಯಾಲಯದ ಬೋಧಕೇತರ ಮತ್ತು ನಿವೃತ್ತಿ ಹೊಂದಿದವರಿಗೆ ಹೆಚ್ಚುವರಿ ನಿವೃತ್ತಿ ವೇತನ ಮತ್ತು ನಿವೃತ್ತಿ ಸೌಲಭ್ಯ ಒದಗಿಸಬೇಕಾಗಿರುವುದರಿಂದ ಸರ್ಕಾರವು ಯೋಜನೇತರ ಅಡಿಯಲ್ಲಿ ನಿಗಧಿಪಡಿಸಿರುವ ರೂ. 7500.00 ಲಕ್ಷಗಳಲ್ಲಿ ಭರಿಸಲು ಸಾಧ್ಯವಾಗುವುದಿಲ್ಲವೆಂದು, ಆದುದರಿಂದ ಮಾರ್ಚ್ ಅಂತ್ಯದವರೆಗೆ ಯೋಜನೇತರ ಅನುದಾನವನ್ನು ಸರಿದೂಗಿಸಿಕೊಳ್ಳಲು ಹೆಚ್ಚುವರಿ ಅನುದಾನದ ಬೇಡಿಕೆಯನ್ನು ಪ್ರಸ್ತಾಪಿಸಿರುತ್ತಾರೆ.

ಸರ್ಕಾರವು ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ : ಕೃಇ 91 ಕೃವಿಬೆ 2012,**

**ಬೆಂಗಳೂರು, ದಿನಾಂಕ : 19-03-2013**

ಪ್ರಸ್ತಾವನೆಯಲ್ಲಿ ವಿವರಿಸಲಾದ ಕಾರಣಗಳ ಹಿನ್ನೆಲೆಯಲ್ಲಿ ಬೆಂಗಳೂರು ಕೃಷಿ ವಿಶ್ವವಿದ್ಯಾಲಯದ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ವೇತನ ಮತ್ತು ಪಿಂಚಣಿಯನ್ನು ಭರಿಸಲು ಅವಶ್ಯವಿರುವ ಹೆಚ್ಚುವರಿ ಅನುದಾನ ರೂ. 1500.00 ಲಕ್ಷಗಳನ್ನು (ಒಂದು ಸಾವಿರದ ಐದು ನೂರು ಲಕ್ಷಗಳು ಮಾತ್ರ)

ಲೆಕ್ಕಶೀರ್ಷಿಕೆ 2415-80-004-1-01-101 ಯೋಜನೇತರ ಅಡಿಯಲ್ಲಿ 2012-13ನೇ ಸಾಲಿನ ಪೂರಕ ಅಂದಾಜು-3ರಲ್ಲಿ ನಿಗಧಿಪಡಿಸಿರುವಂತೆ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಬಿಡುಗಡೆ ಮಾಡಲಾಗಿದೆ :-

1. ಪ್ರತಿ ತಿಂಗಳ ಅನುದಾನವನ್ನು ಆಯಾ ತಿಂಗಳ 20ನೇ ತಾರೀಖಿನಂದು ಅಥವಾ 20ನೇ ತಾರೀಖಿನ ನಂತರ ಹಿಂದಿನ ತಿಂಗಳ ಬಳಕೆ ಪ್ರಮಾಣ ಪತ್ರವನ್ನು ಒದಗಿಸಿ ಬಿಲ್ಲಿಗೆ ಮೇಲು ರುಜು ಪಡೆಯತಕ್ಕದ್ದು;
2. ಸರ್ಕಾರವು ಯಾವ ಉದ್ದೇಶಕ್ಕಾಗಿ ಅನುದಾನ ಬಿಡುಗಡೆ ಮಾಡುವುದೋ ಅದೇ ಉದ್ದೇಶಕ್ಕಾಗಿ ಅನುದಾನವನ್ನು ಉಪಯೋಗಿಸತಕ್ಕದ್ದು;
3. ಸರ್ಕಾರವು ನೀಡಿದ ಸೂಚನೆ, ಆದೇಶಗಳನುಸಾರ ಕೃಷಿ ವಿಶ್ವವಿದ್ಯಾಲಯದವರು ಯೋಜನೆಯ ವೆಚ್ಚದಲ್ಲಿ ಕಟ್ಟುನಿಟ್ಟಾಗಿ ಮಿತವ್ಯಯವನ್ನು ಪಾಲಿಸತಕ್ಕದ್ದು;
4. ಬಿಡುಗಡೆಯಾಗಿರುವ ಅನುದಾನದ ಬಗ್ಗೆ ಸೂಕ್ತ ಸಮಯದಲ್ಲಿ ಮಹಾಲೇಖಪಾಲರ ಲೆಕ್ಕಗಳೊಂದಿಗೆ ಹೊಂದಾಣಿಕೆ ಮಾಡಿಕೊಳ್ಳತಕ್ಕದ್ದು;
5. ಬಿಡುಗಡೆ ಮಾಡಲಾಗಿರುವ ಅನುದಾನವನ್ನು ಆರ್ಥಿಕ ಪರಿಸ್ಥಿತಿಯನ್ನು ಅನುಸರಿಸಿ ಆರ್ಥಿಕ ಇಲಾಖೆಯು ನೀಡಬಹುದಾದ ಸೂಚನೆಗಳಿಗೆ ಒಳಪಟ್ಟಿರುತ್ತದೆ;
6. ಆಯಾ ತಿಂಗಳಿಗೆ ಪ್ರತ್ಯೇಕ ಬಿಲ್ಲನ್ನು ಒದಗಿಸುವುದು.

2. ಬಿಡುಗಡೆಯಾಗಿರುವ ಅನುದಾನಕ್ಕೆ ಹಣಕಾಸು ನಿಯಂತ್ರಣಾಧಿಕಾರಿಗಳು, ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು, ಇವರು ಸಲ್ಲಿಸುವ ಬಿಲ್ಲಿಗೆ ಮೇಲು ರುಜು ಮಾಡುವ ಅಧಿಕಾರವನ್ನು ಸರ್ಕಾರದ ಅಧೀನ ಕಾರ್ಯದರ್ಶಿ (ಯೋಜನೆ), ಕೃಷಿ ಇಲಾಖೆ, ಇವರಿಗೆ ನೀಡಲಾಗಿದೆ.

3. ಈ ಆದೇಶವನ್ನು ಆರ್ಥಿಕ ಇಲಾಖೆಯ ದಿನಾಂಕ : 16-02-2013 ಮತ್ತು 16-03-2013ರ ಟಿಪ್ಪಣಿ ಸಂಖ್ಯೆ : ಆಇ 486 ವೆಚ್ಚ-4/2012ಗಳಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಜಿ. ಆರ್ ವಿಶ್ವನಾಥಾಚಾರ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ (ಕೃಷಿ ಯೋಜನೆ)

**ಇವರಿಗೆ :-**

1. ಮಹಾಲೇಖಪಾಲರು, ಕರ್ನಾಟಕ (ಲೆಕ್ಕಪತ್ರ/ತನಿಖೆ), ಬೆಂಗಳೂರು.
2. ಕುಲಪತಿಗಳು, ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು.
3. ಖಜಾನಾಧಿಕಾರಿ, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
4. ಹಣಕಾಸು ನಿಯಂತ್ರಣಾಧಿಕಾರಿಗಳು, ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು.
5. ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು.
6. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4 & 5), ವಿಧಾನ ಸೌಧ, ಬೆಂಗಳೂರು.
7. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕೃಷಿ ಇಲಾಖೆರವರ ಆಪ್ತ ಸಹಾಯಕರು, ಬಹುಮಹಡಿಗಳ ಕಟ್ಟಡ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.